2.	ಅಲೆಮಾರಿ ಜನಾಂಗದ ಮೆಟ್ರಿಕ್ ಪೂರ್ವ ವಿದ್ಯಾರ್ಥಿಗಳಿಗೆ ವಿಶೇಷ ಪ್ರೋತ್ಸಾಹ ಧನ	20060/-	10
3.	ಹೆಚ್ಚುವರಿ ಊಟ ಮತ್ತು ವಸತಿ ಸೌಕರ್ಯ	108200/-	66
4.	ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ವೇತನ	39575/-	211
5.	ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಲ್ಲಿ ಪ್ರವೇಶ	352050/-	50
	ಒಟ್ಟು	**535825/-**	**351**

ಚಿಕ್ಕನಾಯಕನಹಳ್ಳಿ ಕ್ಷೇತ್ರದ ಹುಳಿಯಾರು ಮತ್ತು ಬುಕ್ಕಾಪಟ್ಟಣ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವುದು

939 (819) ಶ್ರೀ ಸುರೇಶ್ ಬಾಬು ಸಿ.ಬಿ. (ಚಿಕ್ಕನಾಯಕನಹಳ್ಳಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ಕ್ಷೇತ್ರದ ಹುಳಿಯಾರು ಮತ್ತು ಬುಕ್ಕಾಪಟ್ಟಣ ಹೋಬಳಿ ಕೇಂದ್ರದಲ್ಲಿರುವ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಮೇಲ್ದರ್ಜೆಗೇರಿಸುವ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಇದುವರೆಗೆ ಮೇಲ್ದರ್ಜೆಗೇರಿಸಲು ಇಲಾಖೆಯಿಂದ ಕೈಗೊಂಡಿರುವ ಕ್ರಮಗಳೇನು;

ಇ) ಈ ವರ್ಷದಲ್ಲಿಯೇ ಮೇಲ್ದರ್ಜೆಗೇರಿಸಲು ಸಾಧ್ಯವಿದೆಯೇ?

ಶ್ರೀ ಬಿ. ಶ್ರೀರಾಮುಲು (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಚಿಕ್ಕನಾಯಕನಹಳ್ಳಿ ಕ್ಷೇತ್ರದ ವ್ಯಾಪ್ತಿಯಡಿ 2 ತಾಲ್ಲೂಕುಗಳು ಇದ್ದು, ಚಿಕ್ಕನಾಯಕನಹಳ್ಳಿ ಗ್ರಾಮೀಣ ಜನಸಂಖ್ಯೆ 2001 ರ ಜನಗಣತಿ ಪ್ರಕಾರ 1,87,179 ಆಗಿದ್ದು, ಮಾರ್ಗಸೂಚಿಗಳ ಪ್ರಕಾರ ಒಂದು ಸಮುದಾಯ

ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಬಹುದಾಗಿದ್ದು ಅಲ್ಲಿ ಒಂದು ಸಮುದಾಯ ಆರೋಗ್ಯ ಕೇಂದ್ರ ಈಗಾಗಲೇ ಕಾರ್ಯನಿರ್ವಹಿಸುತ್ತಿದೆ. ಹಾಗೂ ಕೊರಟಗೆರೆ ತಾಲ್ಲೂಕು ಗ್ರಾಮೀಣ ಜನಸಂಖ್ಯೆ 1,47,031 ಇದ್ದು ಇಲ್ಲಿಯೂ ಸಹ ಒಂದು ಸಮುದಾಯ ಆರೋಗ್ಯ ಕೇಂದ್ರವನ್ನು ಮಾರ್ಗಸೂಚಿಗಳ ಪ್ರಕಾರ ಮಂಜೂರು ಮಾಡುವ ಅವಕಾಶವಿದ್ದು ಈಗಾಗಲೇ ಒಂದು ಸಮುದಾಯ ಆರೋಗ್ಯ ಕೇಂದ್ರ ಕಾರ್ಯನಿರ್ವಹಿಸುತ್ತಿದೆ. ಆದ್ದರಿಂದ ಹೆಚ್ಚಿನ ಸಮುದಾಯ ಆರೋಗ್ಯ ಕೇಂದ್ರವನ್ನು ಮಂಜೂರು ಮಾಡಲು ಅವಕಾಶವಿರುವುದಿಲ್ಲ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು

940 (1468) ಶ್ರೀ ತನ್ವೀರ್ ಸೇಠ್ (ನರಸಿಂಹರಾಜ) : ಮಾನ್ಯ ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿರುವ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಸಂಖ್ಯೆ ಎಷ್ಟು (ಜಿಲ್ಲಾವಾರು ಮಾಹಿತಿ ನೀಡುವುದು);

ಆ) ಹಾಗಿದ್ದಲ್ಲಿ, ಪ್ರತಿ ವಸತಿ ಶಾಲೆಯಲ್ಲಿ ಎಷ್ಟು ವಿದ್ಯಾರ್ಥಿಗಳು ವಿಧ್ಯಾಭ್ಯಾಸ ಮಾಡುತ್ತಿದ್ದಾರೆ;

ಇ) ಇನ್ನು ಹೆಚ್ಚಿನ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳ ಪ್ರಾರಂಭಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಡಾ॥ ಮುಮ್ತಾಜ್ ಆಲಿ ಖಾನ್ (ಹಜ್, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು) :

ಅ) ಅಲ್ಪಸಂಖ್ಯಾತರ ಇಲಾಖಾವಾತಿಯಿಂದ 51 ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಮಂಜೂರಾಗಿರುತ್ತದೆ.

ಜಿಲ್ಲಾವಾರು ವಿವರವನ್ನು ಅನುಬಂಧ–1 ರಲ್ಲಿ ಲಗತ್ತಿಸಿದೆ.

ಆ) ಮಾಹಿತಿಯನ್ನು ಅನುಬಂಧ–2 ರಲ್ಲಿ ಲಗತ್ತಿಸಿದೆ.